ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 25-5-2017

## ಪತ್ರಿಕಾ ಆಮಂತ್ರಣ

1. ಬೆಂಗಳೂರು ನಗರ ಬಿ.ಬಿ.ಎಂ.ಪಿ. ವ್ಯಾಪ್ತಿಯೊಳಗೆ ಬರುವ ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಉಚಿತ ಕುಡಿಯುವ ನೀರು ಒದಗಿಸುವ ಯೋಜನೆಗೆ ಚಾಲನೆ:

ಉದ್ಘಾಟನೆ:

ಸಿದ್ದರಾಮಯ್ಯ,
ಮುಖ್ಯ ಮಂತ್ರಿಗಳು,
ಕರ್ನಾಟಕ ಸರ್ಕಾರ.

ಗೌರವಾನ್ವಿತ ಅತಿಥಿಗಳು:

ಅನಂತ್ ಕುಮಾರ್,
ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರಗಳ ಸಚಿವರು

ಡಿ.ವಿ. ಸದಾನಂದಗೌಡ,
ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು

ಅಧ್ಯಕ್ಷತೆ.

ದಿನೇಶ್ ಗುಂಡೂರಾವ್,
ಶಾಸಕರು,
ಗಾಂಧಿನಗರ ವಿಧಾನಸಭಾ ಕ್ಷೇತ್ರ.

ದಿನಾಂಕ: 26-05-2017, ಶುಕ್ರವಾರ, ಸಮಯ: ಸಂಜೆ 4.30 ಗಂಟೆಗೆ

ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಆಟದ ಮೈದಾನ, 5ನೇ ಮುಖ್ಯರಸ್ತೆ, ಶ್ರೀರಾಂಪುರಂ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ – ಅವಧಿ ವಿಸ್ತರಣೆ

**ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)**

**2017–18ನೇ ಸಾಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಪ್ರವೇಶ ಪಡೆದು ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಾಲ ಮಂಜೂರಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಜೂನ್ 9 ರವರೆಗೆ ವಿಸ್ತರಿಸಲಾಗಿದೆ.**

**ಸಾಲ ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವೆಬ್‌ಸೈಟ್ www.karnataka.gov.in/dbdbc ರಲ್ಲಿ ಲಾಗಿನ್ ಆಗಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ Username-infra/dbcdcarivu ಮತ್ತು Password-DB(d#098 ನ್ನು ನಮೂದಿಸಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಜೂನ್ 9 ರವರೆಗೆ ಸಲ್ಲಿಸಬಹುದಾಗಿದೆ.**

**ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿ ಮತ್ತು ಪೋಷಕರ ಭಾವಚಿತ್ರ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಹಾಗೂ ಸಿ.ಇ.ಟಿ. ಪ್ರವೇಶ ಪರೀಕ್ಷೆ ಅಡ್ಮಿಷನ್ ಟಿಕೇಟ್‌ನ ಜೆರಾಕ್ಸ್ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.**

**ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಕಚೇರಿಗಳನ್ನು ಅಥವಾ ಡಿ. ದೇವರಾಜ ಅರಸು ಹಿಂದುಳಿದ ಅಭಿವೃದ್ಧಿ ನಿಗಮ (ನಿ), ನಂ 123/1037, 1ನೇ ಮಹಡಿ, 20ನೇ ಮುಖ್ಯರಸ್ತೆ, 5ನೇ ಬ್ಲಾಕ್, ವೆಸ್ಟ್ ಆಫ್ ಕಾರ್ಡ್ ರಸ್ತೆ, ರಾಜಾಜಿನಗರ, ಬೆಂಗಳೂರು – 10 ಈ ವಿಳಾಸದಲ್ಲಿ ಸಂಪರ್ಕಿಸಬಹುದಾಗಿದೆ**

**ಎಸ್‌ಎಂ:ಜೆಡಿ:ಜಿಪಿಆರ್.**

## ರೈತರಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ವರದಾನ – ಆಯುಕ್ತ ಸತೀಶ್ ಜಿ.

**ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)**

ಪ್ರಕೃತಿ ವಿಕೋಪದಿಂದ ಬೆಳೆ ನಷ್ಟ ಅನುಭವಿಸುತ್ತಿರುವ ರೈತರಿಗೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ವರದಾನವಾಗಿದೆ ಎಂದು ಕೃಷಿ ಇಲಾಖೆ ಆಯುಕ್ತರಾದ ಸತೀಶ್ ಜಿ. ಅವರು ತಿಳಿಸಿದರು.

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ವತಿಯಿಂದ ಸಂಸ್ಥೆಯ ಹೆಚ್.ಆರ್. ಅರಿಕೇರಿ ಆಡಿಟೋರಿಯಂನಲ್ಲಿ ಹಮ್ಮಿಕೊಳ್ಳಲಾಗಿದ್ದ ಬೆಳೆ ವಿಮೆ- ಸಮಸ್ಯೆ ಮತ್ತು ಪರಿಹಾರಗಳು ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ರೈತರು ಬೆಳೆಯನ್ನು ಕೇವಲ ವಿಮೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಬೆಳೆಯಬಾರದು. ಇಲಾಖೆಯು ಬೆಳೆ ಕಟಾವು, ಸಂರಕ್ಷಣೆಗೆ ವೆಬ್‌ಪೋರ್ಟ್‌ನ್ನು ಸ್ಥಾಪಿಸಿದೆ. 2016 ರಲ್ಲಿ ಪ್ರಾರಂಭವಾದ

ಪಿಎಂಎಫ್‌ಬಿವೈ ಯೋಜನೆಯ ರೈತರಿಗೆ ಸಾಕಷ್ಟು ನೆರವು ನೀಡಿದೆ. ದೇಶದ ಆರ್ಥಿಕ ವ್ಯವಸ್ಥೆ ಕೃಷಿಯನ್ನು ಅವಲಂಬಿತವಾಗಿದ್ದು, ಕೃಷಿ ಬೆಳೆಗಳು ವಿಫಲವಾದರೆ ಆರ್ಥಿಕ ಸಂಕಷ್ಟ ಎದುರಾಗುತ್ತದೆ. ಸಾಕಷ್ಟು ರೈತರು ಬೆಳೆ ವಿಮೆ ಪಡೆಯುತ್ತಿದ್ದು, ಈ ಯೋಜನೆ ಶೇ 100 ರಷ್ಟು ಪ್ರಗತಿ ಸಾಧಿಸಿಲ್ಲ. ರೈತರು ಹವಾಮಾನಕ್ಕನುಗುಣವಾಗಿ ಬೆಳೆಗಳನ್ನು ಬೆಳೆದರೆ ಒಳಿತು ಎಂದವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಮಲ್ಲಪ್ಪ ಮಾತನಾಡಿ ಸಮಗ್ರ ಬೆಳೆ ವಿಮೆ ಯೋಜನೆಯನ್ನು ಕೇಂದ್ರ ಸರ್ಕಾರ 1985 ರಲ್ಲಿ ಆರಂಭಿಸಿತು. ಈ ಯೋಜನೆಯಡಿ ಕೃಷಿ ಸಾಲ ಪಡೆದವರನ್ನು ಮಾತ್ರ ಸೇರಿಸಲಾಗಿತ್ತು. 1999–2000 ರಲ್ಲಿ ಕೇಂದ್ರ ಸರ್ಕಾರ ರಾಷ್ಟ್ರೀಯ ಕೃಷಿ ವಿಮೆ ಯೋಜನೆ ಜಾರಿಗೆ ತಂದಿತ್ತು. 2016 ರಲ್ಲಿ ಕೇಂದ್ರ ಸರ್ಕಾರ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಜಾರಿಗೆ ತಂದಿತು. ಆದರೂ ಈ ಯೋಜನೆಯ ಪಾಲ್ಗೊಳ್ಳುವಿಕೆ ನಿರೀಕ್ಷಿತ ಮಟ್ಟ ತಲುಪಿಲ್ಲ. ರೈತರು ಬೆಳೆ ವಿಮೆ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಅಪರ ಕೃಷಿ ನಿರ್ದೇಶಕರಾದ ಶಿವರಾಜ್ ಮಾತನಾಡಿ 2016 ರ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ವ್ಯಾಪ್ತಿಗೆ ರಾಜ್ಯದ ಎಲ್ಲಾ ಗ್ರಾಮ, ತಾಲ್ಲೂಕು ಪಂಚಾಯಿತಿಗಳು ಬರುತ್ತದೆ. ಈ ಯೋಜನೆಗೆ 9 ಲಕ್ಷ ರೈತರು ಮುಂಗಾರು ಹಾಗೂ 12 ಲಕ್ಷ ರೈತರು ಹಿಂಗಾರು ಬೆಳೆ ವಿಮೆಗೆ ನೋಂದಣಿ ಮಾಡಿಕೊಂಡಿದ್ದಾರೆ. ಕಬ್ಬು, ತಂಬಾಕು ಹೊರತುಪಡಿಸಿ 40 ಬೆಳೆಗಳು ವಿಮೆ ಸೇರಿದ್ದು, ಇವುಗಳಲ್ಲಿ ತೋಟಗಾರಿಕೆ ಬೆಳೆಗಳು ಸೇರಿವೆ. ಕಳೆದ ವರ್ಷ ಸರ್ಕಾರವು ಬಜೆಟ್‌ನಲ್ಲಿ ಈ ಯೋಜನೆಗೆ 845 ಕೋಟಿ ರೂ. ಮೀಸಲಿಟ್ಟಿದ್ದು, 881 ಕೋಟಿ ರೂ ಖರ್ಚಾಗಿದೆ. (ಅನುದಾನಕ್ಕಿಂತ ಹೆಚ್ಚು ಖರ್ಚು), 2017 ರಲ್ಲಿ ಸರ್ಕಾರ 845 ಕೋಟಿಯನ್ನು ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿದೆ. ಬೆಳೆ ಕಟಾವಿಗೆ ಸಹ ತಂತ್ರಾಂಶ ಅಳವಡಿಸಲಾಗಿದ್ದು ಇದಕ್ಕಾಗಿಯೇ 13,800 ಸ್ಮಾರ್ಟ್ ಫೋನ್‌ಗಳನ್ನು ಬಳಸಲಾಗುತ್ತಿದೆ. ಭೂಮಿ ತಂತ್ರಾಂಶದಿಂದ ರೈತರ ಹೆಸರು, ವಿವರಗಳನ್ನು ಅವಲಂಬಿಸಿ ವಿಮೆ, ಇನ್ನಿತರ ಸೌಲಭ್ಯಗಳನ್ನು ನೀಡಲಾಗುತ್ತಿದೆ. ರೈತರ ವಿಮೆ ಪರಿಹಾರ ಮೊತ್ತ 128 ಕೋಟಿ ರೂ. ಇತ್ಯರ್ಥವಾಗಿದ್ದು, ಇನ್ನೂ 516 ಕೋಟಿ ರೂ. ಪರಿಹಾರಗೊಳ್ಳದೇ ಬಾಕಿ ಉಳಿದಿವೆ. ಕೇಂದ್ರ ಸರ್ಕಾರ 17 ವಿಮಾ ಕಂಪನಿಗಳನ್ನು ಗುರುತಿಸಿ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲು ಅನುಮತಿ ಸೂಚಿಸಿದೆ ಎಂದರು.

ಕಾರ್ಯಾಗಾರದಲ್ಲಿ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರಾದ ನಾಗರಾಜ್, ಕೃಷಿ ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿ ಕೃಷ್ಣಪ್ಪ ಹಾಗೂ ಇತರ ಪದಾಧಿಕಾರಿಗಳು, ವಿಮೆ, ಬ್ಯಾಂಕಿಂಗ್ ಸಂಸ್ಥೆಯ ಮುಖ್ಯಸ್ಥರು ಉಪಸ್ಥಿತರಿದ್ದರು.

**ಎಸ್‌ಎಂ:ಕೆಎನ್‌ಕೆ::ಜಿಪಿಆರ್.**

## ಸಚಿವರ ಪ್ರವಾಸ

**ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)**

**ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ಮೇ 26 ರಿಂದ 28 ರವರೆಗೆ ಹುಬ್ಬಳ್ಳಿ, ಗದಗ, ವಿಜಯಪುರ, ಬಾಗಲಕೋಟೆ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಆಯಾ ಜಿಲ್ಲೆಯ ಬರ**

ನಿರ್ವಹಣೆ, ಅರಣ್ಯ ಹಕ್ಕು ಸಮಿತಿ, ವಿಲೇವಾರಿಯಾಗಿರುವ ಹಾಗೂ ಬಾಕಿಯಿರುವ ಪ್ರಕರಣಗಳ ಬಗ್ಗೆ ಹಾಗೂ ಇತರೆ ವಿಷಯಗಳ ಕುರಿತು ಚರ್ಚೆ ನಡೆಸುವರು.

ಎಸ್‌ಎಂ:ಜೆಡಿ:ಜಿಪಿಆರ್.

## ಮೇ 27 ರಂದು
## ಮಾಜಿ ಪ್ರಧಾನ ಮಂತ್ರಿ ಜವಾಹರ್ ಲಾಲ್ ನೆಹರುರವರ 53ನೇ ಪುಣ್ಯತಿಥಿ

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ಮಾಜಿ ಪ್ರಧಾನ ಮಂತ್ರಿ ದಿವಂಗತ ಜವಾಹರ್‌ಲಾಲ್ ನೆಹರುರವರ 53ನೇ ಪುಣ್ಯತಿಥಿ ಅಂಗವಾಗಿ ಮೇ 27 ರ ಶನಿವಾರದಂದು ಬೆಳಿಗ್ಗೆ 9-15 ಗಂಟೆಗೆ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.